# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☎:0816-2255650,2273511 ಫ್ಯಾಕ್ಸ್: 0816-2270719

**ಸಂಖ್ಯೆ:ತು.ವಿ.:ಪ.ವಿ.:ವಿ.ನಿ.-04:2022-23 / 252** **ದಿನಾಂಕ : 18.03.2023**

## ಪರಿಷ್ಕೃತ ಅಧಿಸೂಚನೆ-2

ವಿಷಯ : 2018-19 ರಿಂದ 2020-21 ರವರೆಗೆ ಕೋವಿಡ್-19 ರ ಹಿನ್ನೆಲೆಯಲ್ಲಿ ಇಲ್ಲಿಯವರೆಗೆ **ಪರೀಕ್ಷಾ ಶುಲ್ಕ ಪಾವತಿಸದ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ಪಾವತಿಸಲು ಅಂತಿಮ ಅವಕಾಶ ನೀಡಿರುವ ಕುರಿತು.**

ಉಲ್ಲೇಖ: 1. ಸಂಖ್ಯೆ:ತು.ವಿ.:ಪ.ವಿ.:ಯು.ಜಿ.ಪ.ಶುಲ್ಕ:ವಿ.ನಿ.-04:2019-20 / 929 ದಿನಾಂಕ : 04.03.2020
2.ಸಂಖ್ಯೆ:ತು.ವಿ.:ಪ.ವಿ.:ಯು.ಜಿ.ಪ.ಶುಲ್ಕ: 2020-21 / 246 ದಿನಾಂಕ : 03.02.2021
3.ಸಂಖ್ಯೆ:ತು.ವಿ.:ಪ.ವಿ.:ಯು.ಜಿ.ಪ.ಶುಲ್ಕ:ವಿ.ನಿ.-04:2022-23 / 382 ದಿನಾಂಕ : 17.08.2022
4.ಸಂಖ್ಯೆ:ತು.ವಿ.:ಪ.ವಿ.:ವಿ.ನಿ.-04:2022-23 / 365 ದಿನಾಂಕ : 16.08.2022
5.ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 16.03.2023.

* * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಕೋವಿಡ್-19 ರ ಸಂದರ್ಭಕ್ಕನುಗುಣವಾಗಿ ಯು.ಜಿ.ಸಿ. ಹಾಗೂ ಕರ್ನಾಟಕ ರಾಜ್ಯ ಸರ್ಕಾರದ ನಿರ್ದೇಶನಗಳನ್ವಯ ಮೊದಲನೇ ಮತ್ತು ಮೂರನೇ ಸೆಮಿಸ್ಟರ್‌ಗಳಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳು ಎರಡನೇ ಮತ್ತು ನಾಲ್ಕನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ, ಪರೀಕ್ಷಾ ಶುಲ್ಕ ಅಧಿಸೂಚನೆಯನ್ವಯ ನಿಗದಿತ ದಿನಾಂಕದೊಳಗೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ್ದಲ್ಲಿ ಅಂತಹ ವಿದ್ಯಾರ್ಥಿಗಳನ್ನು ಎರಡನೇ ಮತ್ತು ನಾಲ್ಕನೇ ಸೆಮಿಸ್ಟರ್‌ಗಳಿಗೆ ತೇರ್ಗಡೆಗೊಳಿಸಲಾಗಿರುತ್ತದೆ. ಸದರಿ ಕ್ರಮವನ್ನು ಮೊದಲನೇ ಮತ್ತು ಮೂರನೇ ಸೆಮಿಸ್ಟರ್‌ನ ಪರೀಕ್ಷೆಯಲ್ಲಿ ಅನುತ್ತೀರ್ಣರಾದಂತಹ ವಿದ್ಯಾರ್ಥಿಗಳಿಗೆ ಪದವಿ ಮುಗಿಸಬೇಕಾದ ನಿಗದಿತ ಅವಧಿಗಿಂತ ಒಂದು ವರ್ಷ ಹೆಚ್ಚುವರಿಯಾಗಿ (ಅಂದರೆ ನಾಲ್ಕು ವರ್ಷಗಳ ಅವಧಿಯೊಳಗೆ) ಸಮಯವನ್ನು ವಿಸ್ತರಿಸಿ ಉತ್ತೀರ್ಣರಾಗಲು ಅವಕಾಶ ಕಲ್ಪಿಸಲಾಗಿದೆ.

ಪದವಿಯ ಅವಧಿ ಅಂದರೆ ಮೂರು ವರ್ಷಗಳ ಒಳಗಾಗಿ ಅಥವಾ ಹೆಚ್ಚುವರಿ ಒಂದು ವರ್ಷದೊಳಗೆ **(Aditional One Year)** ಉತ್ತೀರ್ಣರಾದಲ್ಲಿ ಎರಡು ಮತ್ತು ನಾಲ್ಕನೇ ಸೆಮಿಸ್ಟರ್ ಪರೀಕ್ಷೆಗಳಲ್ಲಿ ತೇರ್ಗಡೆಗೊಳಿಸಲಾಗಿರುತ್ತದೆ. ಹಾಗೂ ಈ ಅವಕಾಶವು ಸಹ ಒಂದು ಬಾರಿಗೆ ಮಾತ್ರ ಅನ್ವಯಿಸುತ್ತದೆ. ಕೋವಿಡ್-19 ರನ್ವಯ ತೇರ್ಗಡೆಗೊಳಿಸಲಾದ ಶೈಕ್ಷಣಿಕ ಸಾಲಿಗೆ ಸಂಬಂಧಿಸಿದಂತೆ ಆಯಾ ಕಾಲಕ್ಕೆ ಹೊರಡಿಸಲಾದ ಪರೀಕ್ಷಾ ಶುಲ್ಕ ಅಧಿಸೂಚನೆಯನ್ವಯ ಕೊನೆಯ ದಿನಾಂಕದೊಳಗೆ ಪರೀಕ್ಷಾ ಶುಲ್ಕವನ್ನು ಪಾವತಿಸದ ವಿದ್ಯಾರ್ಥಿಗಳಿಗೆ ಈಗಾಗಲೇ ದಿನಾಂಕ: 06.02.2023 ರವರೆಗೆ ಅವಕಾಶ ಕಲ್ಪಿಸಲಾಗಿತ್ತು. ಮುಂದುವರೆದು, ಅನೇಕ ಕಾಲೇಜುಗಳ ವಿದ್ಯಾರ್ಥಿಗಳು ಮನವಿ ಪತ್ರಗಳನ್ನು ಸಲ್ಲಿಸುತ್ತಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಒಂದು ಕೊನೆಯ ಅವಕಾಶವಾಗಿ ದಿನಾಂಕ: 17.04.2023 **ರೊಳಗೆ ನಿಗದಿತ ಪರೀಕ್ಷಾ ಶುಲ್ಕದೊಂದಿಗೆ ಹೆಚ್ಚುವರಿಯಾಗಿ ರೂ. 1000/- ಗಳ ವಿಶೇಷ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಿ ಪ್ರಾಂಶುಪಾಲರ EMS Login ಮುಖಾಂತರ ಪರೀಕ್ಷಾ ಅರ್ಜಿ ಸಲ್ಲಿಸಿ, ವಿದ್ಯಾರ್ಥಿಗಳ ಆಂತರಿಕ ಅಂಕ ಮತ್ತು ಹಾಜರಾತಿ ವಿವರವನ್ನು ಸಲ್ಲಿಸಿದ್ದಲ್ಲಿ ಮಾತ್ರ ಮುಂದಿನ ಕ್ರಮ ಕೈಗೊಳ್ಳಲಾಗುವುದು.**

ಸದರಿ ಕ್ರಮವನ್ನು ಸ್ನಾತಕೋತ್ತರ ಪದವಿಗಳ ಮೊದಲನೇ ಸೆಮಿಸ್ಟರ್‌ನ ಪರೀಕ್ಷೆಯಲ್ಲಿ ಅನುತ್ತೀರ್ಣರಾದಂತಹ ವಿದ್ಯಾರ್ಥಿಗಳಿಗೂ ಸಹ ಮೇಲಿನಂತೆ ಕ್ರಮವಹಿಸಲು ಅವಕಾಶ ಕಲ್ಪಿಸಲಾಗಿದ್ದು, ಸದರಿ ಮಾಹಿತಿಯನ್ನು ಸಂಬಂಧಪಟ್ಟ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು/ಸಂಯೋಜಕರು ಹಾಗೂ ಕಾಲೇಜಿನ ಪ್ರಾಂಶುಪಾಲರಿಗೆ ಸೂಚಿಸಲಾಗಿದೆ. ಸ್ನಾತಕೋತ್ತರ ವಿಭಾಗಗಳ / **ಕಾಲೇಜಿನ ವತಿಯಿಂದ ಸದರಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕಗಳ ವಿವರಗಳನ್ನು ಪ್ರತ್ಯೇಕವಾಗಿ ಪರೀಕ್ಷಾಂಗ ವಿಭಾಗಕ್ಕೆ ಸಲ್ಲಿಸತಕ್ಕದ್ದು.**

ಪರೀಕ್ಷಾ ಅಧಿಸೂಚನೆಗಳನ್ವಯ ನಿಗಧಿತ ದಿನಾಂಕದೊಳಗೆ ಈಗಾಗಲೇ ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳು ಮತ್ತೊಂದು ಬಾರಿ ಪರೀಕ್ಷಾ ಶುಲ್ಕವನ್ನು ಪಾವತಿಸುವಂತಿಲ್ಲ.

ವಿ.ಸೂ.: 1. 2018-19 ನೇ ಸಾಲಿನಿಂದ 2020-21 ನೇ ಸಾಲಿನ ಕೋವಿಡ್-19 ರ ಹಿನ್ನೆಲೆಯಲ್ಲಿ ಎರಡನೇ ಮತ್ತು ನಾಲ್ಕನೇ ಸೆಮಿಸ್ಟರ್ ಪರೀಕ್ಷೆಗಳ ಪರೀಕ್ಷಾ ಶುಲ್ಕ ಪಾವತಿಸದ ವಿದ್ಯಾರ್ಥಿಗಳಿಗೆ ಮಾತ್ರ ಈ ಪರಿಷ್ಕೃತ ಅಧಿಸೂಚನೆಯು ಅನ್ವಯವಾಗುತ್ತದೆ.

2. ಈ ಸುತ್ತೋಲೆಯನ್ವಯ ಕೋವಿಡ್- 19 ಹಿನ್ನೆಲೆಯಲ್ಲಿ ಪರೀಕ್ಷಾ ಶುಲ್ಕ ಪಾವತಿಸದೇ ಇರುವ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಅಂತಿಮ ಅವಕಾಶ ನೀಡಲಾಗಿರುತ್ತದೆ. ಈ ಅವಕಾಶ ಮುಗಿದ ನಂತರ ಕಾಲೇಜಿನ ಪ್ರಾಂಶುಪಾಲರು/ ವಿದ್ಯಾರ್ಥಿಗಳು ಯಾವುದೇ ಮನವಿಗಳನ್ನು ವಿಶ್ವವಿದ್ಯಾನಿಲಯದ ಪರೀಕ್ಷಾ ವಿಭಾಗಕ್ಕೆ ಸಲ್ಲಿಸದಿರಲು ಈ ಮೂಲಕ ಸೂಚಿಸಲಾಗಿದೆ. ಒಂದು ವೇಳೆ ಮನವಿಗಳನ್ನು ಸಲ್ಲಿಸಿದರೂ ಸಹ ಅಂತಹ ಮನವಿಗಳನ್ನು ಪುರಸ್ಕರಿಸುವುದಿಲ್ಲ.

18/3/23
ಕುಲಸಚಿವರು (ಪರೀಕ್ಷಾಂಗ)

ಗೆ, ಪ್ರಾಂಶುಪಾಲರು, ಘಟಕ/ ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ಇಂದೇ ವಿ.ವಿ. ಅಂತರ್ಜಾಲದಲ್ಲಿ ಪ್ರಕಟಿಸುವುದು. 5.ಕಚೇರಿ ಪ್ರತಿ